# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು - 572 103, ☎ : 0816-2255650, 2273511 ಫ್ಯಾಕ್ಸ್ :0816-2270719


ಸಂಖ್ಯೆ: ತುವಿ: ಪ.ವಿ: 2020-21/234 ದಿನಾಂಕ: 04.09.2020

## ಪರಿಷ್ಕೃತ ಸುತ್ತೋಲೆ

**ವಿಷಯ :** ಪ್ರಾಯೋಗಿಕ ಮತ್ತು ಮೌಖಿಕ (Viva-Voce) ಪರೀಕ್ಷೆಗಳನ್ನು ನಡೆಸುವ ಕುರಿತು.

**ಉಲ್ಲೇಖ :** ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:03.09.2020

* * * * *

ತುಮಕೂರು ವಿಶ್ವವಿದ್ಯಾನಿಲಯದ 2019-20 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ, ಪ್ರಸ್ತುತ ಆರನೇ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ಕೋರ್ಸ್ ಪೂರೈಸಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಅಂದರೆ 2014-15 ನೇ ಸಾಲಿನಿಂದ 2017-18 ನೇ ಸಾಲಿನವರೆಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಎರಡು, ನಾಲ್ಕು (ಪೂರಕ) ಮತ್ತು ಆರನೇ (ನವೀನ ಮತ್ತು ಪೂರಕ) ಸೆಮಿಸ್ಟರ್‌ಗಳ **ಮುಂದೂಡಲಾಗಿದ್ದ, ಪ್ರಾಯೋಗಿಕ ಮತ್ತು ಮೌಖಿಕ (Viva-Voce) ಪರೀಕ್ಷೆಗಳನ್ನು ದಿನಾಂಕ:18.09.2020 ಿಂದ ಪ್ರಾರಂಭಿಸಿ** ಆಯಾ ಕಾಲೇಜುಗಳಲ್ಲಿಯೇ ನಡೆಸಲಾಗುವುದು. ಈ ಪರೀಕ್ಷೆಗಳಿಗೆ ಸದರಿ ಕಾಲೇಜುಗಳ ಪ್ರಾಂಶುಪಾಲರುಗಳನ್ನು ಪರೀಕ್ಷಾ ಮುಖ್ಯ ಅಧೀಕ್ಷಕರನ್ನಾಗಿ ನೇಮಕಾತಿ ಮಾಡಲಾಗಿದ್ದು, ಕೋವಿಡ್-19 ಕ್ಕೆ ಸಂಬಂಧಿಸಿದ ಸರ್ಕಾರದ ಹಾಗೂ ಯು.ಜಿ.ಸಿ.ಯ ಪರೀಕ್ಷಾ ಮಾರ್ಗಸೂಚಿಗಳನ್ವಯ ಮತ್ತು ಸೈದ್ಧಾಂತಿಕ ಪರೀಕ್ಷೆಗಳಿಗೆ ತೊಂದರೆಗಳಾಗದಂತೆ ಪರೀಕ್ಷಾ ಸಿದ್ಧತೆಗಳನ್ನು ಮಾಡಿಕೊಂಡು ಪರೀಕ್ಷೆಗಳನ್ನು ತುರ್ತಾಗಿ ನಡೆಸಲು ಅಗತ್ಯ ಕ್ರಮಕೈಗೊಳ್ಳಲು ಈ ಮೂಲಕ ಸೂಚಿಸಲಾಗಿದೆ.

**ವಿಶೇಷ ಸೂಚನೆ:** ಮೇಲ್ಕಂಡ ಪರೀಕ್ಷೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.

**ಆದೇಶದ ಮೇರೆಗೆ**

4/9/2020

**ಕುಲಸಚಿವರು (ಪರೀಕ್ಷಾಂಗ)**

**ಗೆ,**

1. ಪ್ರಾಂಶುಪಾಲರು, ಘಟಕ ಕಾಲೇಜುಗಳು ಹಾಗೂ ಸಂಯೋಜನೆಗೊಳಪಟ್ಟ ಎಲ್ಲಾ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಎಲ್ಲಾ ಸ್ನಾತಕ ಪದವಿ ಪರೀಕ್ಷಾ ಮಂಡಳಿಯ ಅಧ್ಯಕ್ಷರುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.- ಮಾಹಿತಿ & ಅಗತ್ಯ ಕ್ರಮಕ್ಕಾಗಿ

**ಪ್ರತಿಗಳು:**

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಛೇರಿ ಪ್ರತಿ.